ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೊಂದನೆಯ ಅಧಿವೇಶನ

ಶುಕ್ರವಾರ, ದಿನಾಂಕ: 25ನೇ ಸೆಪ್ಟಂಬರ್, 2020

ಬೀದರ್ ಜಿಲ್ಲೆಯಲ್ಲಿ ಕುರಿ ಮತ್ತು ಉಣ್ಣೆ ಅಭಿವೃದ್ಧಿ ಮಂಡಳಿಯಿಂದ ನೀಡಿದ ಸಾಲದ ಬಗ್ಗೆ

ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು):-

593(817) ಮಾನ್ಯ ಪಶುಸಂಗೋಪನೆ ಹಾಗೂ ಹಜ್ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೀದರ್ ಜಿಲ್ಲೆಯಲ್ಲಿ 2016-17, 2017-18ನೇ ಸಾಲಿನಲ್ಲಿ ಕುರಿ ಮತ್ತು ಉಣ್ಣೆ ಅಭಿವೃದ್ಧಿ ಮಂಡಳಿಯಿಂದ ಎಷ್ಟು ಫಲಾನುಭವಿಗಳಿಗೆ ಸಾಲ ಸೌಲಭ್ಯ ನೀಡಲಾಗಿದೆ; (ಕ್ಷೇತ್ರವಾರು, ಬ್ಯಾಂಕ್‌ವಾರು ವಿವರ ನೀಡುವುದು)

(ಆ) ಈ ಸಾಲಿನಲ್ಲಿ ಜಿಲ್ಲೆಯಲ್ಲಿ ಸಾಲ ಪಡೆದ ಫಲಾನುಭವಿಗಳು ಯಾವ ಉದ್ದೇಶಕ್ಕಾಗಿ ಪಡೆಯಲಾಗಿತ್ತೋ ಅದಕ್ಕೆ ಬಳಸಿಕೊಳ್ಳದೆ ಕೇವಲ ಸರ್ಕಾರದಿಂದ ಸಿಗುವ ಸಬ್ಸಿಡಿ ಹಣ ಮಾತ್ರ ಪಡೆದುಕೊಂಡು ಸರ್ಕಾರಕ್ಕೆ ಮೋಸ ಮಾಡಿರುವ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಅಂತಹ ಫಲಾನುಭವಿಗಳನ್ನು ತನಿಖೆಗೆ ಒಳಪಡಿಸಲಾಗುತ್ತದೆಯೇ; ತನಿಖೆ ನಡೆಸುವುದಾದರೆ ಯಾವಾಗ?